ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 167 (952)

2) ಸದಸ್ಯರ ಹೆಸರು : ಶ್ರೀ ಬಸವರಾಜು ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3) ಉತ್ತರಿಸುವ ದಿನಾಂಕ : 15-03-2021

4) ಉತ್ತರಿಸುವವರು : ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಕಾಡು ಪ್ರಾಣಿಗಳು ಕಾಡಿನಿಂದ ನಾಡಿಗೆ ಜನ ವಸತಿ ಪ್ರದೇಶಕ್ಕೆ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಬಂದಿದ್ದಲ್ಲಿ, ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗಿದೆ?	ವನ್ಯಪ್ರಾಣಿಗಳು ನಗರ / ಪಟ್ಟಣದ ವಸತಿ ಪ್ರದೇಶಗಳಿಗೆ ಬರುವುದನ್ನು ತಡೆಯಲು ಇಲಾಖಾ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. **<u>ಆನೆ ಮತ್ತು ಇತರೆ ಸಸ್ಯಹಾರಿ ವನ್ಯಪ್ರಾಣಿ;</u>** 1. ರಾಜ್ಯದಲ್ಲಿರುವ ವನ್ಯಜೀವಿಗಳಿಗೆ ಸಂಪೂರ್ಣ ರಕ್ಷಣೆ ನೀಡುವ ಸಲುವಾಗಿ ರಾಷ್ಟ್ರೀಯ ಉದ್ಯಾನವನ, ಅಭಯಾರಣ್ಯ, ಹುಲಿ ಮೀಸಲು ಅರಣ್ಯ, ಸಂರಕ್ಷಿತ ಮೀಸಲು ಅರಣ್ಯಗಳನ್ನು ಘೋಷಿಸಲಾಗಿರುತ್ತದೆ. 2. ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು 2019-20ನೇ ಸಾಲಿನಿಂದ ರೂ.5.00ಕೋಟಿ ವೆಚ್ಚದಲ್ಲಿ ಲಂಟಾನ ಮತ್ತು ಯುಪಟೋರಿಯಂ ಕಳೆಗಳ ನಿರ್ಮೂಲನೆ ಎಂಬ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತ ಹಂತವಾಗಿ ಕಿತ್ತು, ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ. 3. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.

4. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.
5. ಕಳ್ಳಬೇಟೆ ತಡೆ ಶಿಬಿರಗಳ ಹಾಗೂ ಕ್ಷಿಪ್ರ ಕಾರ್ಯಾಚರಣೆ ತಂಡಗಳ ರೂಪದಲ್ಲಿ (Rapid Response Teams) ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ, ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ ಹಾಗೂ Wireless Networking ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.
6. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24x7 ಗಂಟೆ ಕಾರ್ಯ ನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.
7. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ, ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.
8. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.
9. **ಚಿರತೆ:** ರಾಜ್ಯದಲ್ಲಿ ಚಿರತೆ ಹಾವಳಿ ತಡೆಗಟ್ಟಲು ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಮುಂಜಾಗ್ರತಾ ಕ್ರಮವಾಗಿ ತಮ್ಮ ತಮ್ಮ ವಿಭಾಗಗಳಲ್ಲಿ 3-4 ಜನರನ್ನೊಳಗೊಂಡ ರಕ್ಷಣಾ ಪಡೆಯನ್ನು ರಚಿಸಿ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನಸಂಪರ್ಕ ಸಭೆ ನಡೆಸಲು ಹಾಗೂ ಮುಂಜಾಗ್ರತಾ ಕ್ರಮವಾಗಿ ಹಾವಳಿ ಇರುವ ಕಡೆ ರಾತ್ರಿ ಗಸ್ತು ಮಾಡಲು ಮತ್ತು ಚಿರತೆ ಹಿಡಿಯಲು ಬೇಕಾದ ಬೋನು, Tranquilizer Gun ಮತ್ತಿತರೆ ಉಪಕರಣಗಳನ್ನು ಸಿದ್ಧತೆ ಮಾಡಿಕೊಂಡು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ವಲಯ ಅರಣ್ಯಾಧಿಕಾರಿಗಳೊಂದಿಗೆ ಭೇಟಿ ನೀಡಿ ಸಾರ್ವಜನಿಕರಿಗೆ ತಿಳುವಳಿಕೆ ನೀಡುವುದಲ್ಲದೇ, ಅದರಲ್ಲೂ ಕಾಡಂಚಿನಲ್ಲಿ ವಾಸಿಸುವ ಜನರಿಗೆ ಹೆಚ್ಚಿನ ತಿಳುವಳಿಕೆ ನೀಡುವಂತೆ ರಾಜ್ಯದ ಎಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

		10. **ಹುಲಿ:** ರಾಜ್ಯದಲ್ಲಿ ಹುಲಿ ಹಾವಳಿ ಕಂಡುಬಂದಂತಹ ಸಂದರ್ಭದಲ್ಲಿ ಹಾವಳಿ ತಡೆಗಟ್ಟಲು ಅರಣ್ಯಾಧಿಕಾರಿಗಳಿಗೆ ಮುಂಜಾಗ್ರತಾ ಕ್ರಮವಾಗಿ ತಮ್ಮ ತಮ್ಮ ವಿಭಾಗಗಳಲ್ಲಿ 3-4 ಜನರನ್ನೊಳಗೊಂಡ ರಕ್ಷಣಾ ಪಡೆಯನ್ನು ರಚಿಸಿ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನಸಂಪರ್ಕ ಸಭೆ ನಡೆಸಲು ಹಾಗೂ ಮುಂಜಾಗ್ರತಾ ಕ್ರಮವಾಗಿ ಹಾವಳಿ ಇರುವ ಕಡೆ ಹಗಲು-ರಾತ್ರಿ ಗಸ್ತು ಮಾಡಲು ಮತ್ತು ಹುಲಿ ಹಿಡಿಯಲು ಬೇಕಾದ ಬೋನು, Tranquilizer Gun ಮತ್ತಿತರೆ ಉಪಕರಣಗಳನ್ನು ಸಿದ್ಧತೆ ಮಾಡಿಕೊಂಡು ಸಂಬಂಧಪಟ್ಟ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಬೇಟಿ ನೀಡಿ ಸಾರ್ವಜನಿಕರಿಗೆ ಅರಿವು ನೀಡುವುದಲ್ಲದೇ, ಅದರಲ್ಲೂ ಕಾಡಂಚಿನಲ್ಲಿ ವಾಸಿಸುವ ಜನರಿಗೆ ಹೆಚ್ಚಿನ ತಿಳುವಳಿಕೆ ನೀಡಲಾಗುತ್ತಿದೆ. 11. **ಕರಡಿ:** ರಾಜ್ಯದಲ್ಲಿ ಕರಡಿ ಹಾವಳಿ ಕಂಡು ಬಂದಂತಹ ಸಂದರ್ಭದಲ್ಲಿ ಕಳ್ಳಬೇಟೆ ತಡೆ ಶಿಬಿರ / ಕ್ಷಿಪ್ರ ತಡೆ ಶಿಬಿರದ ಸಿಬ್ಬಂದಿಯ ಮೂಲಕ ಕರಡಿಯನ್ನು ಹಿಮ್ಮೆಟ್ಟಿಸುವ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಹಾನಿ ಪ್ರಕರಣಗಳಲ್ಲಿ ದಯಾತ್ಮಕ ಧನವನ್ನು ಪಾವತಿಸಲಾಗುತ್ತಿದ್ದು, ಇತ್ತೀಚಿನ ದಿನಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಹಾನಿ ಪ್ರಕರಣಗಳಿಗೆ ಇ-ತಂತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ನಿಯಮಾನುಸಾರ ಪರಿಶೀಲಿಸಿ, ಆದ್ಯತೆ ಮೇರೆಗೆ ನೇರವಾಗಿ ಸಂತ್ರಸ್ತರ ಖಾತೆಗೆ ಪಾವತಿಸುವ ಪ್ರಕ್ರಿಯೆಯನ್ನು ಇ-ಪರಿಹಾರ ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದೆ.

ಸಂಖ್ಯೆ: ಅಪಜೀ 38 ಎಫ್‌ಡಬ್ಲ್ಯೂಎಲ್ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು